# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1634(1981)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಬೆಳಗಾವಿಯೂ ಸೇರಿದಂತೆ ವಿವಿಧ ಮಹಾನಗರ ಪಾಲಿಕೆ ಚುನಾವಣೆ ಕುರಿತು

(ಅ) ಕಳೆದ 2 ವರ್ಷಗಳಿಂದ ಬೆಳಗಾವಿಯೂ ಸೇರಿದಂತೆ ರಾಜ್ಯದ 6 ಮಹಾನಗರ ಪಾಲಿಕೆಗಳು ಚುನಾವಣೆಗಾಗಿ ಕಾಯುತ್ತಿದ್ದು, ಚುನಾವಣೆ ನಡೆಸಲು ಸರ್ಕಾರಕ್ಕಿರುವ ತೊಂದರೆಗಳೇನು;

(ಆ) ಮಹಾನಗರ ಪಾಲಿಕೆಗಳಲ್ಲಿ ಜನಪ್ರತಿನಿಧಿಗಳಿಲ್ಲದೆ ಜನಸಾಮಾನ್ಯರು ಸಮಸ್ಯೆ ಅನುಭವಿಸುತ್ತಿರುವುದು ಸರ್ಕಾರ ಗಮನಿಸಿದೆಯೇ;

(ಇ) ಮಾರ್ಚ್ 9,2019ಕ್ಕೆ ಬೆಳಗಾವಿ ಪಾಲಿಕೆಯ ಅವಧಿ ಮುಗಿದಿದ್ದು, ಚುನಾವಣೆ ನಡೆಸುವ ಪ್ರಕ್ರಿಯೆಯ ಕುರಿತು ವಿವರ ನೀಡುವುದು;

(ಈ) ನಿಯಮಗಳ ಪ್ರಕಾರ ಸ್ಥಳೀಯ ಸಂಸ್ಥೆಗಳ ಅವಧಿ ಮುಕ್ತಾಯಕ್ಕೆ ಒಂದು ವರ್ಷ ಮೊದಲೇ ಚುನಾವಣೆ ಸಲುವಾಗಿ ಎಲ್ಲವನ್ನು ಸಿದ್ಧಮಾಡಿಕೊಳ್ಳಬೇಕಾಗಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು?